ಆ) ಇವುಗಳ ನಿರ್ವಹಣೆ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ನಿಗದಿಪಡಿಸಲಾದ ಹಣವೆಷ್ಟು, ಬಿಡುಗಡೆಯಾದ ಹಾಗೂ ಇಲ್ಲಿಯವರೆಗೆ ಖರ್ಚಾದ ಹಣ ಎಷ್ಟು ;

ಇ) ಸದರಿ ಮತಕ್ಷೇತ್ರದಲ್ಲಿ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ತೀವ್ರವಾದ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ನಿಜವಲ್ಲವೇ ;

ಈ) ಮೇಲ್ಕಂಡ ಕ್ಷೇತ್ರದಲ್ಲಿ ಯಾವ ಯಾವ ವರ್ಗಗಳ ವಿದ್ಯಾರ್ಥಿ ವಸತಿ ನಿಲಯಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ;

ಉ) ಹಾಗಿದ್ದಲ್ಲಿ ಇದನ್ನು ನೀಗಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಬಾಲಚಂದರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು): ಆ) ಬಸವ ಕಲ್ಯಾಣ ಮತಕ್ಷೇತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯಗಳ ವಿವರಗಳು ಇಂತಿವೆ.

ಮೆಟ್ರಿಕ್ ನಂತರ			ಮೆಟ್ರಿಕ್ ಪೂರ್ವ		
ಬಾಲಕರು	ಬಾಲಕಿಯರು	ಒಟ್ಟು	ಬಾಲಕರು	ಬಾಲಕಿಯರು	ಒಟ್ಟು
1	1	2	2	8	10

ಆ) ಸದರಿ ವಿದ್ಯಾರ್ಥಿನಿಲಯಗಳ ನಿರ್ವಹಣೆ ಹಾಗೂ ಮೂಲಭೂತ ಸೌಕರ್ಯಕ್ಕಾಗಿ ಪ್ರಸಕ್ತ ಸಾಲಿನಲ್ಲಿ ನಿಗಧಿಪಡಿಸಿದ, ಬಿಡುಗಡೆಯಾದ ಹಾಗೂ ಇಲ್ಲಿಯವರೆಗೆ ಖರ್ಚಾದ ಹಣದ ವಿವರ ಈ ಕೆಳಗಿನಂತಿದೆ.

ನಿಗದಿಪಡಿಸಿದ ಅನುದಾನ	ಬಿಡುಗಡೆಯಾದ ಅನುದಾನ	ಖರ್ಚಾದ ಅನುದಾನ	ನಿಗದಿಪಡಿಸಿದ ಅನುದಾನ	ಬಿಡುಗಡೆಯಾದ ಅನುದಾನ	ಖರ್ಚಾದ ಅನುದಾನ
8.99	6.81	3.15	60.84	45.63	4.31

ಇ) ಹೌದು.

ಈ) ಹೌದು, ಸದರಿ ಮತಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಬಸವ ಕಲ್ಯಾಣ ತಾಲ್ಲುಕು ಬೆಟಗೇರಿ ಗ್ರಾಮದಲ್ಲಿ ಒಂದು ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು 2006–07ನೇ ಸಾಲಿನಲ್ಲಿ ಪ್ರಾರಂಭಿಸಲಾಗಿದೆ.

ಉ) ಆಯವ್ಯಯದಲ್ಲಿ ಒದಗಿಸಿದ ಅನುದಾನದ ಲಭ್ಯತೆ, ಬೇಡಿಕೆ ಮತ್ತು ಅವಶ್ಯಕತೆಗಳನ್ನು ಅನುಸರಿಸಿ ಇದನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು.

87 (175) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಆ) ಕಳೆದ ವರ್ಷ ಮಂಡಿಸಿದ ಆಯವ್ಯಯದಲ್ಲಿ (2006 ರಲ್ಲಿ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಯಾವ ಯಾವ ಹೊಸ ಕಾರ್ಯಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ಪ್ರಸ್ತಾಪಿಸಲಾಗಿತ್ತು ;

ಆ) ಇದಕ್ಕೆ ಅಗತ್ಯವಿದ್ದ ಹಣವೆಷ್ಟು ಹಾಗೂ ಈ ಪೈಕಿ ಇಲ್ಲಿಯವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

ಇ) ಈ ಪೈಕಿ ಎಷ್ಟು ಕಾರ್ಯಕ್ರಮಗಳು ಜಾರಿಯಲ್ಲಿದೆ ; ಇವುಗಳ ಪ್ರಗತಿ ಈಗ ಯಾವ ಹಂತದಲ್ಲಿದೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ;

ಈ) ಈ ಪೈಕಿ ಯಾವ ಯಾವ ಕಾರ್ಯಕ್ರಮಗಳು ಕೇಂದ್ರ ಸರ್ಕಾರದ ವಿದೇಶಿ ನೆರವಿನಿಂದ ಕಾರ್ಯಗತವಾಗುತ್ತಿವೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ;

ಉ) ಇದಕ್ಕಾಗಿ ಎಷ್ಟು ಹಣ ಕೇಂದ್ರ ಸರ್ಕಾರದಿಂದ, ವಿದೇಶಿ ಮತ್ತು ನೆರವಿನ ಮೂಲಕ ರಾಜ್ಯ ಸರ್ಕಾರಕ್ಕೆ ಬಂದಿದೆ ;

ಊ) ಇಲಾಖೆಯ ಕಾರ್ಯಕ್ರಮಗಳಿಗಾಗಿ ರಾಜ್ಯ ಹಾಗೂ ಕೇಂದ್ರ ಕೋಟ್ಯಾಂತರ ರೂಪಾಯಿಗಳನ್ನು ವೆಚ್ಚ ಮಾಡುತ್ತಿದ್ದರೂ ಸಹ ಬಹುತೇಕ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸಿಬ್ಬಂದಿ ಹಾಗೂ ಔಷಧಿಗಳ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಋ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 1. ಎಲ್ಲಾ ತಾಲ್ಲೂಕು ಆಸ್ಪತ್ರೆಗಳನ್ನು ಹಂತ ಹಂತವಾಗಿ 100 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವುದು.

2. ಔಷಧಿಗಳ ಲಭ್ಯತೆಗಾಗಿ ರಾಜ್ಯ ವಲಯದ ಹಾಗೂ ಜಿಲ್ಲಾ ವಲಯಗಳ ಆಸ್ಪತ್ರೆಗಳಿಗೆ 2006–07ನೇ ಸಾಲಿನಲ್ಲಿ ಹೆಚ್ಚುವರಿ ಔಷಧಿ ಪೂರೈಕೆ.

3. ಸುವರ್ಣ ಸುರಕ್ಷಾ ವಿಮೆ ಯೋಜನೆ.

4. ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿನ ಮೇಲ್ದರ್ಜೆಗೇರಿಸ ಲಾಗಿರುವ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಸಲಕರಣೆಗಳನ್ನು ಒದಗಿಸುವಿಕೆ.

ಆ) ಈ ಸಾಲಿಗಾಗಿ ಅಗತ್ಯವಿರುವ ಹಣ 281 ಕೋಟಿ ರೂ.ಗಳಲ್ಲಿ ರೂ. 142.50 ಕೋಟಿಗಳು ಬಿಡುಗಡೆಯಾಗಿರುತ್ತದೆ.

ಇ) 1. 100 ಹಾಸಿಗೆಗಳ ಆಸ್ಪತ್ರೆಗಳ ಕಟ್ಟಡಗಳನ್ನು ಕಟ್ಟಲು ಪ್ರಕ್ರಿಯೆ ಪ್ರಾರಂಭಿಸಲಾಗಿದೆ. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

2. ಸಲಕರಣೆ ಸಾಮಗ್ರಿಗಳನ್ನು ಖರೀದಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

3. ಸುವರ್ಣ ಸುರಕ್ಷ ಕಾರ್ಯಕ್ರಮವನ್ನು ಜಾರಿಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.
4. ರಾಜ್ಯ ಹಾಗೂ ಜಿಲ್ಲಾ ವಲಯಗಳ ಆಸ್ಪತ್ರೆಗಳಿಗೆ ಹೆಚ್ಚುವರಿ ಔಷಧಿ ಬಿಡುಗಡೆ ಮಾಡಲು ರಾಜ್ಯ ಡ್ರಗ್ ಲಾಜಿಸ್ಟಿಕ್ ಸೊಸೈಟಿಯಿಂದ ಕ್ರಮ ಕೈಗೊಳ್ಳಲಾಗಿದೆ.

ಇದಲ್ಲದೇ ರಾಜ್ಯವಲಯದಲ್ಲಿ ಬರುವ ಕಾರ್ಯಕ್ರಮಗಳಾಗಿವೆ.

ಈ) ಇವುಗಳು ರಾಜ್ಯ ವಲಯದ ಯೋಜನೆಗಳಾಗಿರುತ್ತವೆ.

ಉ) ಉದ್ಭವಿಸುವುದಿಲ್ಲ.

ಊ) ಬಂದಿದೆ.

ಋ) ವಿಶೇಷ ನೇರ ನೇಮಕಾತಿಯಿಂದ 500 ವೈದ್ಯಾಧಿಕಾರಿಗಳನ್ನು ಎರಡು ಹಂತಗಳಲ್ಲಿ ಭತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ಹಂತದಲ್ಲಿದ್ದು ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಎರಡನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

2907 ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಭರ್ತಿಮಾಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ ಅರ್ಜಿ ಆಹ್ವಾಹಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ. ಪ್ರಕ್ರಿಯೆ ಪೂರ್ಣಗೊಂಡ ನಂತರ ಖಾಲಿ ಹುದ್ದೆಗಳನ್ನು ಆದ್ಯತೆ ಮೇರೆಗೆ ತುಂಬಲಾಗುವುದು. ಇದಲ್ಲದೇ ಗುತ್ತಿಗೆ ಆಧಾರದ ಮೇರೆಗೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಸರ್ಕಾರದ ಕೆಲವು ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಉಂಟಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದ್ದು, ಅಂತಹ ಆಸ್ಪತ್ರೆಗಳಿಗೆ ಬೇಕಾಗಿರುವ ಔಷಧಿಗಳು ಆ ಜಿಲ್ಲಾ ಉಗ್ರಾಣದಲ್ಲಿ ಇಲ್ಲದಿದ್ದ ಪಕ್ಷದಲ್ಲಿ ಔಷಧಿ ಲಭ್ಯವಿರುವ ಬೇರೆ ಜಿಲ್ಲೆಯ ಔಷಧಿ ಉಗ್ರಾಣಗಳಿಂದ ಪಡೆದು ಔಷಧಿ ಪೂರೈಸಿದ್ದು, ಬಡರೋಗಿಗಳ ಚಿಕಿತ್ಸೆಗೆ ಯಾವುದೇ ತೊಂದರೆ ಉಂಟಾಗದಂತೆ ನಿರ್ವಹಣೆಗೆ ಕ್ರಮ ಕೈಗೊಳ್ಳಲಾಗಿದೆ.

ಈಗಾಗಲೇ ಇಲಾಖೆಯಲ್ಲಿರುವ 228 ಔಷಧಿ, ರಸಾಯನಿಕ ಮತ್ತು ಇತರೆ ವಸ್ತುಗಳಿಗೆ ದರಗುತ್ತಿಗೆ ಜೊತೆಗೆ 2006–08ನೇ ಸಾಲಿಗೆ 317 ಔಷಧಿಗಳಿಗೆ ಹೊಸ ದರಗುತ್ತಿಗೆ ಅಂತಿಮಗೊಳಿಸಿದ್ದು, ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾಗಿರುವ ಎಲ್ಲಾ ಔಷಧಿಗಳನ್ನು ಪೂರೈಸುವ ಉದ್ದೇಶ ಹೊಂದಲಾಗಿದೆ.

88 (136) ಶ್ರೀ ಪಾಟೀಲ್ ಡಿ.ಆರ್. (ಗದಗ್): ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?